ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ವನ್ಯ ಜೀವಿಗಳ ಉಪಟಳ ನಿಯಂತ್ರಣಕ್ಕೆ ವೈಜ್ಞಾನಿಕ ಹಾಗೂ ನಿರ್ದಿಷ್ಟ ಕ್ರಮಗಳನ್ನು ಅಳವಡಿಸಿಕೊಳ್ಳುವ ಕುರಿತು

ಶ್ರೀಮತಿ ಎಸ್.ವೀಣಾಅಚ್ಚಯ್ಯ(ವಿಧಾನಸಭೆ ಯಿಂದ ಚುನಾಯಿತರಾದವರು):-

876 (879) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಹುಲಿ, ಚಿರತೆ, ಕಾಡುಹಂದಿ ಸೇರಿದಂತೆ ವನ್ಯಜೀವಿಗಳ ಉಪಟಳ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದರ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಈ ರೀತಿ ವನ್ಯಜೀವಿಗಳ ಉಪಟಳ ಸತತವಾಗಿ ಹೆಚ್ಚುತ್ತಿರುವುದಕ್ಕೆ ಸರ್ಕಾರ ಗುರುತಿಸಿರುವ ವೈಜ್ಞಾನಿಕ ಕಾರಣಗಳೇನು;

(ಈ) ಪ್ರತಿಯೊಂದು ವನ್ಯಜೀವಿಯ ಆಹಾರಕ್ರಮ, ಜೀವನ ಪದ್ಧತಿ ಬೇರೆಯದೇ ಆಗಿರುವುದರಿಂದ ಇವುಗಳಿಂದಾಗುವ ಉಪಟಳ ತಪ್ಪಿಸಲು ಏಕ ರೀತಿಯ ನಿಯಂತ್ರಣ ಕ್ರಮಗಳನ್ನು ಅಳವಡಿಸಿಕೊಳ್ಳುವ ಬದಲಾಗಿ ವೈಜ್ಞಾನಿಕ ಹಾಗೂ ನಿರ್ದಿಷ್ಟವಾದ ಕ್ರಮಗಳನ್ನು ಅಳವಡಿಸಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರಗಳನ್ನು ನೀಡುವುದು)